**ಉಡುಪಿ ನ್ಯಾಯಾಲಯದ ವಾಚನಾಲಯದ ದುರಸ್ಥಿ**

2629 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಉಡುಪಿ ನ್ಯಾಯಾಲಯದ ವಾಚನಾಲಯಗಳ ದುರಸ್ಥಿಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?*

*ಆ) ವಾಚನಾಲಯಗಳಲ್ಲಿರುವ ಜರ್ನಲ್‌ಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡಲಾಗುತ್ತಿದೆಯೇ? ಇಲ್ಲದಿದ್ದಲ್ಲಿ ಸರ್ಕಾರದವರು ಈ ಬಗ್ಗೆ ಕೈಗೊಳ್ಳಲಿರುವ ಕ್ರಮಗಳೇನು?*

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು) :

ಅ) ಉಡುಪಿ ನ್ಯಾಯಾಲಯದ ವಾಚನಾಲಯದ ದುರಸ್ತಿಯ ಅವಶ್ಯಕತೆ ಬಗ್ಗೆ ಪ್ರಸ್ತಾವನೆ ಸರ್ಕಾರಕ್ಕೆ ಬಂದಿರುವುದಿಲ್ಲ.

ಆ) ವಾಚನಾಲಯದ ಜರ್ನಲ್‌ಗಳ ಸಮರ್ಪಕ ನಿರ್ವಹಣೆ ಮಾಡಲಾಗುತ್ತಿದೆ.

**ಉಡುಪಿಯಲ್ಲಿ ಕೋಳಿಮೊಟ್ಟೆ ಮತ್ತು ಮಾಂಸದ ಫಾರ್ಮ್ ಪ್ರಾರಂಭ**

2628 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

*ಅ) ಉಡುಪಿಯಲ್ಲಿ ಕೋಳಿ ಮೊಟ್ಟೆ ಮತ್ತು ಮಾಂಸದ ಫಾರ್ಮ್‌ನ್ನು ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಮುಂದಿದ್ದು, ಅದು ಯಾವ ಹಂತದಲ್ಲಿದೆ?*

*ಆ) ಇದಕ್ಕೆ ಬೇಕಾಗುವ ಜಾಗ, ಬೇಡಿಕೆ ಬಹಳಷ್ಟು ಇರುವಾಗ ಈ ಬಗ್ಗೆ ಸರಕಾರ ಕ್ರಮ ತೆಗೆದುಕೊಳ್ಳಲು ವಿಳಂಬವೇಕೆ? ಯಾವಾಗ ಪ್ರಾರಂಭಿಸಲಾಗುವುದು (ವಿವರ ನೀಡುವುದು)?*

ಶ್ರೀ ಬಿ.ಬಿ. ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು) :

ಅ) ಉಡುಪಿಯಲ್ಲಿ ಕೋಳಿಮೊಟ್ಟೆ ಮತ್ತು ಮಾಂಸದ ಫಾರ್ಮ್‌ನ್ನು ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

**ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರದ ಕೆರೆಗಳು**

1124 - ಶ್ರೀ ಸಿ.ಹೆಚ್. ವಿಜಯಶಂಕರ್ (ಹುಣಸೂರು) : ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

*ಅ) ಗ್ರಾಮೀಣ ಪ್ರದೇಶದಲ್ಲಿ ಗ್ರಾಮ, ಪಂಚಾಯ್ತಿ ವ್ಯಾಪ್ತಿಯಲ್ಲಿ ಬರದ ಕೆರೆಗಳನ್ನು ಮೀನುಗಾರಿಕೆಗೆ ಗುತ್ತಿಗೆ ಆಧಾರದ ಮೇಲೆ ನ್ಯಾಯಕ್ತವಾಗಿ ಒಬ್ಬರಿಗೆ ಗುತ್ತಿಗೆ ಕೊಡುವುದರಿಂದ ಅನೇಕ ರೀತಿಯ ಸಮಸ್ಯೆಗಳಿಗೆ ಕಾರಣವಾಗುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

*ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು?*

ಶ್ರೀ ಕೆ. ಜಯಪ್ರಕಾಶ ಹೆಗ್ಡೆ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

**ಉದ್ಯೋಗ ವಿನಿಮಯ ಕಛೇರಿ**

1361 - ಶ್ರೀ ವಿಶ್ವೇಶ್ವರ ಹೆಗಡೆ (ಅಂಕೋಲ) : ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

*ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಉದ್ಯೋಗ ವಿನಿಮಯ ಕಛೇರಿಯಲ್ಲಿ ಒಟ್ಟು ನೋಂದಣಿಯಾದ ಸಂಖ್ಯೆ ಎಷ್ಟು?*

*ಆ) 1994-95, 1995-96ರಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಯಾವ ಯಾವ ಇಲಾಖೆಯಲ್ಲಿ ಎಷ್ಟು ಜನರಿಗೆ ಉದ್ಯೋಗ ವಿನಿಮಯ ಕಛೇರಿಯಿಂದ ಉದ್ಯೋಗವನ್ನು ಒದಗಿಸಲಾಗಿದೆ? (ಇಲಾಖಾವಾರು ವಿವರ ನೀಡುವುದು);*

ಶ್ರೀ ಬಿ. ಸತ್ಯನಾರಾಯಣ (ಕಾರ್ಮಿಕ ರಾಜ್ಯ ಸಚಿವರು) :

ಅ) 1996ನೇ ಮಾರ್ಚ್ ಅಂತ್ಯಕ್ಕೆ 51,122 ಅಭ್ಯರ್ಥಿಗಳು ಅವರ ಹೆಸರನ್ನು ನೋಂದಾಯಿಸಿರುತ್ತಾರೆ.

ಆ) 1994-95ನೇ ಸಾಲಿನಲ್ಲಿ 1122 ಮತ್ತು 1995-96ನೇ ಸಾಲಿನಲ್ಲಿ 99 ಅಭ್ಯರ್ಥಿಗಳಿಗೆ ಉದ್ಯೋಗಾವಕಾಶ ಒದಗಿಸಲಾಗಿದೆ. ಇಲಾಖಾವಾರು ಮಾಹಿತಿಯನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ.

## ಅನುಬಂಧ-1

**1994-95 ಹಾಗು 1995-96ನೇ ಸಾಲಿನಲ್ಲಿ ಉತ್ತರ ಕನ್ನಡ ಜಿಲ್ಲೆಯ ಉದ್ಯೋಗ ವಿನಿಮಯ ಕೇಂದ್ರಗಳ ಮೂಲಕ ಉದ್ಯೋಗ ಪಡೆದ ಅಭ್ಯರ್ಥಿಗಳ ಇಲಾಖಾವಾರು ಮಾಹಿತಿ.**

| ಕ್ರಮ ಸಂಖ್ಯೆ | ಇಲಾಖೆ | ಉದ್ಯೋಗ ಪಡೆದ ಅಭ್ಯರ್ಥಿಗಳ ಸಂಖ್ಯೆ |
|---|---|---|
| | **1994-95** | |
| | **ರಾಜ್ಯ ಸರ್ಕಾರ** | |
| 1) | ಅಗ್ನಿಶಾಮಕ ಇಲಾಖೆ | 37 |
| 2) | ಕಾರಾಗೃಹ ಇಲಾಖೆ | 1 |
| 3) | ಸಮಾಜ ಕಲ್ಯಾಣ ಇಲಾಖೆ | 3 |
| 4) | ನ್ಯಾಯಾಂಗ ಇಲಾಖೆ | 1 |
| 5) | ಬಂದರು ಇಲಾಖೆ | 2 |
| 6) | ಖಜಾನೆ ಇಲಾಖೆ | 1 |
| 7) | ಶಿಕ್ಷಣ ಇಲಾಖೆ | 796 |
| 8) | ತಾಂತ್ರಿಕ ಶಿಕ್ಷಣ ಇಲಾಖೆ | 1 |